ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ ನ್ಯಾಯಾಲಯ, ಕೆಜಿಎಫ್

ಸಿ.ಸಿ.ನಂ.10/2025

ಚಾಸಾ: 4 ಪ್ರಾಸಾ:2

ದಿನಾಂಕಃ 03.12.2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

| | |
|---|---|
| ಸಾಕ್ಷಿದಾರರ ಹೆಸರು– | ವಾಜಿದ್ |
| ತಂದೆಯ ಹೆಸರು– | ಮೊಹಮ್ಮದ್ ಇಕ್ಬಾಲ್ |
| ವಯಸ್ಸು – | 48 ವರ್ಷ |
| ಉದ್ಯೋಗ– | ಖಾಸಗಿ ಕೆಲಸ |
| ವಾಸ– | ಕೆಜಿಎಫ್ |

**ಮುಖ್ಯ ವಿಚಾರಣೆಃ ಮಾನ್ಯ ಎಪಿಪಿ ರವರಿಂದಃ**

**1.** ಚಾಸಾ–**1** ರಿಂದ **3** ನನಗೆ ಗೊತ್ತು. ಸಾಕ್ಷಿಗೆ ಸ್ಥಳ ಮಹಜರ್ ನ್ನು ತೋರಿಸಿದ್ದು ಅದನ್ನು ನೋಡಿ ತನ್ನ ಸಹಿ ಎಂದು ಒಪ್ಪಿದ ಮೇರೆಗೆ ಮಹಜರ್ ನಿಪಿ–**2** ಹಾಗೂ ಸಾಕ್ಷಿಯ ಸಹಿಯನ್ನು ನಿಪಿ–**2**(ಎ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ನಾನು ಕಳೆದ ಒಂದು ವರ್ಷಗಳ ಹಿಂದೆ ಆಸ್ಪತ್ರೆಯಲ್ಲಿ ಮಾಡಿರುತ್ತೇನೆ. ನಿಪಿ–**2** ರಲ್ಲಿ ಬರೆದಿರುವ ವಿಷಯಗಳ ಬಗ್ಗೆ ನನಗೆ ಏನು ಗೊತ್ತಿಲ್ಲ. ಯಾವ ವಿಷಯಕ್ಕೆ ಸಂಬಂಧಿಸಿದಂತೆ ನನ್ನ ಸಹಿ ಪಡೆದುಕೊಂಡಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ಪೋಲೀಸರು ನನ್ನ ಸಮಕ್ಷಮ ಯಾವುದೇ ಸ್ಥಳ ಪಂಚನಾಮೆ ಮಾಡಿರುವುದಿಲ್ಲ ಹಾಗೂ ಛಾಯಾ ಚಿತ್ರಗಳನ್ನು ತೆಗೆದಿರುವುದಿಲ್ಲ.

**(ಈ ಹಂತದಲ್ಲಿ ಮಾನ್ಯ ಎಪಿಪಿ ರವರು ಸಾಕ್ಷಿಯನ್ನು ಪ್ರತಿಕೂಲ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು)**

**ಪಾಟೀ ಸವಾಲುಃಮಾನ್ಯ ಎಪಿಪಿ ರವರಿಂದಃ**

2. ದಿನಾಂಕ 15.09.2024 ರಂದು ಪೋಲೀಸರು ಕೃತ್ಯ ನಡೆದ ಸ್ಥಳಕ್ಕೆ ಭೇಟಿ ನೀಡಿ ಚಾಸಾ–2 ರವರು ತೋರಿಸಿದ ಸ್ಥಳದಲ್ಲಿ ನನ್ನ ಮತ್ತು ಚಾಸಾ–3 ರವರ ಸಮಕ್ಷಮ ಸಂಜೆ 5.15 ಗಂಟೆಯಿಂದ 6.00 ಗಂಟೆಯವರೆಗೂ ನಿಪಿ–2 ರಂತೆ ಸ್ಥಳ ಪಂಚನಾಮೆ ಮಾಡಿ ನನ್ನ ಸಹಿಯನ್ನು ಪಡೆದುಕೊಂಡಿರುತ್ತಾರೆ ಎಂದರೆ ಸುಳ್ಳು. ನಿಪಿ–2 ರಲ್ಲಿ ಬರೆದಿರುವ ಅಂಶಗಳು ನನಗೆ ಗೊತ್ತಿದ್ದರೂ

ಸಹ ಆರೋಪಿತರಿಗೆ ಸಹಾಯ ಮಾಡುವ ಸಲುವಾಗಿ ನಾನು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ವಕೀಲರು ಇರುವುದಿಲ್ಲ ಎಂದು ತಿಳಿಸಿರುತ್ತಾರೆ**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆ ಮೇರೆಗೆ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸರಿ ಇದೆ

(ಜಯಲಕ್ಷ್ಮೀ ಎನ್.ಬಿ)
ಪ್ರಧಾನ ಹಿರಿಯ ಸಿ.ಜೆ. ಮತ್ತು ಜೆಎಂಎಫ್‌ಸಿ
ಕೆಜಿಎಫ್